# ಕರ್ನಾಟಕ ಸರ್ಕಾರ

**ಸಂಖ್ಯೆ:** ಎಂಇಡಿ 104 ಆರ್‌ಐ 2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:28.07.2023.

## ಅಧಿಸೂಚನೆ

ಕರ್ನಾಟಕ ರಾಜ್ಯ ವಿವಾದ ನಿರ್ಣಯ ನೀತಿ 2021 ನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇವರ ಅಧ್ಯಕ್ಷತೆಯಲ್ಲಿ ವಿವಾದ ಪರಿಹಾರ ಮಂಡಳಿಯನ್ನು ಈ ಕೆಳಕಂಡಂತೆ ರಚಿಸಿ ಆದೇಶಿಸಿದೆ.

| | | |
|---|---|---|
| 1 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ | ಅಧ್ಯಕ್ಷರು |
| 2 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ ಅಥವಾ ಅವರು ನಿಯೋಜಿಸುವ ಕಾನೂನು ಇಲಾಖೆ ಪ್ರತಿನಿಧಿ | ಸದಸ್ಯರು |
| 3 | ಕಾನೂನು ಕೋಶದ ಮುಖ್ಯಸ್ಥರು, ವೈದ್ಯಕೀಯ ಶಿಕ್ಷಣ ಇಲಾಖೆ. | ಸದಸ್ಯರು |
| 4 | ಪ್ರಕರಣಕ್ಕೆ ಸಂಬಂಧಿಸಿದ ವ್ಯಾಜ್ಯ ನಿರ್ವಹಣಾಧಿಕಾರಿ | ಸದಸ್ಯ ಕಾರ್ಯದರ್ಶಿ |

### ಮಾರ್ಗಸೂಚಿಗಳು

- ವ್ಯಾಜ್ಯ/ದಾವೆ ತೀರ್ಮಾನದ ನಂತರ ಸರ್ಕಾರಿ ವಕೀಲರು ಮಾನ್ಯ ನ್ಯಾಯಾಲಯದ ತೀರ್ಪು/ಆದೇಶದೊಂದಿಗೆ ತಮ್ಮ ಅಭಿಪ್ರಾಯವನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ಕಾನೂನು ಕೋಶದ ಮುಖ್ಯಸ್ಥರಿಗೆ ಕಳುಹಿಸಿ, ಅದರ ಪ್ರತಿಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ಕಳುಹಿಸುವುದು.
- ಮಾನ್ಯ ನ್ಯಾಯಾಲಯದ ಆದೇಶಧ ವಿರುದ್ಧ ಮೇಲ್ಮನವಿ ಸಲ್ಲಿಸುವುದು ಯೋಗ್ಯವೇ ಅಥವಾ ಇಲ್ಲವೇ ಎಂಬ ಬಗ್ಗೆ ಅಭಿಪ್ರಾಯ ಪಡೆಯಲು ಕಡತವನ್ನು ಕಾನೂನು ಕೋಶದ ಮುಖ್ಯಸ್ಥರಿಗೆ ಕಳುಹಿಸುವುದು.
- ಕಾನೂನು ಕೋಶದ ಮುಖ್ಯಸ್ಥರು ಮಾನ್ಯ ನ್ಯಾಯಾಲಯದ ತೀರ್ಪು/ಆದೇಶವನ್ನು ಕೂಲಂಕುಷಾಗಿ ಪರಿಶೀಲಿಸಿ, ಕಾನೂನು ಇಲಾಖೆಯೊಂದಿಗೆ ಸಮಾಲೋಚಿಸಿ ತೀರ್ಪು/ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸುವುದು ಯೋಗ್ಯವೇ ಅಥವಾ ಇಲ್ಲವೇ ಎಂಬ ಬಗ್ಗೆ ಸೂಕ್ತ ಸಮರ್ಥನೆಯೊಂದಿಗೆ ವೈದ್ಯಕೀಯ ಶಿಕ್ಷಣ ಇಲಾಖೆಗೆ ಅಭಿಪ್ರಾಯ ನೀಡುವುದು.
- ಕಾನೂನು ಕೋಶದ ಮುಖ್ಯಸ್ಥರಿಂದ ಅಭಿಪ್ರಾಯವನ್ನು ಸ್ವೀಕರಿಸಿದ ನಂತರ ಮಾನ್ಯ ನ್ಯಾಯಾಲಯದ ತೀರ್ಪು/ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಬೇಕೆ ಅಥವಾ ಬೇಡವೇ ಎಂಬ ಬಗ್ಗೆ ಅಥವಾ ಬೇರೆ ಯಾವುದೇ ಕ್ರಮವನ್ನು ಕೈಗೊಳ್ಳುವ ಬಗ್ಗೆ ನಿರ್ಧರಿಸಲು ಇಲಾಖಾ ಮುಖ್ಯಸ್ಥರ ಅಧ್ಯಕ್ಷತೆಯಲ್ಲಿ ರಚಿಸಲಾದ ವಿವಾದ ಪರಿಹಾರ ಮಂಡಳಿಯ ಮುಂದೆ ಪ್ರಕರಣವನ್ನು ಮಂಡಿಸುವುದು. ಮಂಡಳಿ ತೆಗೆದುಕೊಂಡ ನಿರ್ಧಾರವನ್ನು ಅನುಷ್ಠಾಗೊಳಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎ. ಶ್ರೀನಿಧಿ)**
ಸರ್ಕಾರದ ಅಧೀನ ಕಾರ್ಯದರ್ಶಿ-3,
**ವೈದ್ಯಕೀಯ ಶಿಕ್ಷಣ ಇಲಾಖೆ.**

**ಇವರಿಗೆ:**

1. ಅಡ್ವಕೇಟ್ ಜನರಲ್, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ. ಕಾನೂನು ಇಲಾಖೆ , ವಿಧಾನಸೌಧ, ಬೆಂಗಳೂರು.

3. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, ಬೆಂಗಳೂರು-11.
4. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬಿಎಮ್‌ಸಿಆರ್‌ಐ (ಹಳೆಯ ಕಟ್ಟಡ), ಬೆಂಗಳೂರು-02.
5. ಎಲ್ಲಾ ಸ್ವಾಯತ್ತ ವೈದ್ಯಕೀಯ ವಿಜ್ಞಾನ ಸಂಸ್ಥೆಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಡೀನ್ ಹಾಗೂ ನಿರ್ದೇಶಕರುಗಳಿಗೆ (DME ಮುಖಾಂತರ).
6. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ನರ್ಸಿಂಗ್ ಕೌನ್ಸಿಲ್, ಗಾಂಧಿನಗರ, ಬೆಂಗಳೂರು.
7. ವಿಶೇಷಾಧಿಕಾರಿಗಳು, ಕರ್ನಾಟಕ ಶುಶ್ರೂಷಾ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಪರೀಕ್ಷಾ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ಇವರ ಆಪ್ತ ಸಹಾಯಕರು.

uploaded
ns